ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 25–11–2019

# ಪತ್ರಿಕಾ ಆಮಂತ್ರಣ

1. ಸಂವಿಧಾನ ದಿವಸ್ ಪ್ರಯುಕ್ತ ಡಾ ಬಿ. ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆಯ ಮೂಲಕ ಗೌರವ ಸಮರ್ಪಣೆ:

ರಾಜ್ಯ ವಿಧಾನ ಪರಿಷತ್ತಿನ ಸಭಾಪತಿ ಕೆ ಪ್ರತಾಪ್‌ಚಂದ್ರ ಶೆಟ್ಟಿ ಹಾಗೂ
ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಂದ

ದಿನಾಂಕ : 26–11–2019 ಮಂಗಳವಾರ ಬೆಳಿಗ್ಗೆ 10–00 ಗಂಟೆಗೆ
ಸ್ಥಳ : ಡಾ ಬಿ ಆರ್ ಅಂಬೇಡ್ಕರ್ ಪ್ರತಿಮೆ, ವಿಧಾನ ಸೌಧ ಮುಂಭಾಗ, ಬೆಂಗಳೂರು

2. ಸಂವಿಧಾನ ದಿವಸ್ ಪ್ರಯುಕ್ತ ಸಂವಿಧಾನ ಪಕ್ಷಿನೋಟ :

ಘನ ಉಪಸ್ಥಿತಿ :
ರಾಜ್ಯ ವಿಧಾನ ಪರಿಷತ್ತಿನ ಸಭಾಪತಿ ಕೆ ಪ್ರತಾಪ್‌ಚಂದ್ರ ಶೆಟ್ಟಿ ಹಾಗೂ
ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಂದ

ಪ್ರಧಾನ ಭಾಷಣ :

ನ್ಯಾ : ಎನ್. ಕುಮಾರ್,
ವಿಶ್ರಾಂತ ನ್ಯಾಯಮೂರ್ತಿಗಳು,
ಕರ್ನಾಟಕ ಉಚ್ಚ ನ್ಯಾಯಾಲಯ

ದಿನಾಂಕ: 26–11–2019 ಮಂಗಳವಾರ ಬೆಳಿಗ್ಗೆ 10–30 ಗಂಟೆಗೆ
ಸ್ಥಳ : ಔತಣ ಸಭಾಂಗಣ ( ಬ್ಯಾಂಕ್ವೆಟ್ ಹಾಲ್ ), ವಿಧಾನ ಸೌಧ, ಬೆಂಗಳೂರು

3.. "ಸಂವಿಧಾನ ದಿನಾಚರಣೆ" ಪ್ರತಿಜ್ಞಾವಿಧಿ ಕಾರ್ಯಕ್ರಮ

ಪ್ರತಿಜ್ಞಾವಿಧಿ ಬೋಧನೆ :

ಶ್ರೀ ಬಿ. ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ : 26–11–2019 ಮಂಗಳವಾರ ಬೆಳಿಗ್ಗೆ 11–00 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ : 334, ಸಮ್ಮೇಳನ ಸಭಾಂಗಣ,
ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಪದವೀಧರರ ಮತದಾರರ ಪಟ್ಟಿ ತಯಾರಿಕೆ ಪರಿಷ್ಕೃತ ವೇಳಾಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 25 (ಕರ್ನಾಟಕ ವಾರ್ತೆ)

ಕರ್ನಾಟಕ ಆಗ್ನೇಯ ಮತ್ತು ಪಶ್ಚಿಮ ಪದವೀಧರರ ಕ್ಷೇತ್ರ ಹಾಗೂ ಕರ್ನಾಟಕ ಈಶಾನ್ಯ ಮತ್ತು ಬೆಂಗಳೂರು ಶಿಕ್ಷಕರ ಕ್ಷೇತ್ರಗಳಿಗೆ ಮತದಾರರ ಪಟ್ಟಿ ತಯಾರಿಕೆ ಸಂಬಂಧಿಸಿದಂತೆ ಪರಿಷ್ಕೃತ ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ. ಕರಡು ಮತದಾರರ ಪಟ್ಟಿ ಪ್ರಕಟಣೆ ಡಿಸೆಂಬರ್ 7, 2019. ಹಕ್ಕು ಮತ್ತು ಆಕ್ಷೇಪಣೆಗಳನ್ನು ಭರ್ತಿ ಮಾಡುವ ದಿನಾಂಕ ಅವಧಿ ಡಿಸೆಂಬರ್ 7 ರಿಂದ ಡಿಸೆಂಬರ್ 23 ರವರೆಗೆ, ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ವಿಲೇವಾರಿ ಮಾಡುವ ದಿನಾಂಕ ಮತ್ತು ಪೂರಕಗಳನ್ನು ತಯಾರಿಸಿ ಮುದ್ರಿಸುವ ದಿನಾಂಕ: 10–01–2020. ಅಂತಿಮ ಮತದಾರರ ಪಟ್ಟಿಯ ಪ್ರಕಟಣೆ ಜನವರಿ 16, 2020. ಹೆಚ್ಚಿನ ಸಂಖ್ಯೆಯಲ್ಲಿ ಎಲ್ಲಾ ಅರ್ಹ ವ್ಯಕ್ತಿಗಳು ಮತದಾರರ ಪಟ್ಟಿಯಲ್ಲಿ ನೊಂದಾಯಿಸಿಕೊಳ್ಳಲು ಮುಖ್ಯ ಚುನಾವಣಾಧಿಕಾರಿ ಕಚೇರಿ, ಕರ್ನಾಟಕ ಇವರ ಪ್ರಕಟಣೆ ತಿಳಿಸಿದೆ.

## ಗುತ್ತಿಗೆ ಆಧಾರದ ಮೇರೆಗೆ ಐ. ಟಿ. ಸ್ಪೇಷಲಿಸ್ಟ್‌ನ ಒಂದು ಹುದ್ದೆಗೆ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 25 (ಕರ್ನಾಟಕ ವಾರ್ತೆ) :

ಮುಖ್ಯ ಚುನಾವಣಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಚುನಾವಣೆಗಳು) ಇವರ ಕಚೇರಿಯಲ್ಲಿ ಐ.ಟಿ. ಸ್ಪೇಷಲಿಸ್ಟ್‌ನ ಒಂದು ಹುದ್ದೆಯನ್ನು ಆರು ತಿಂಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ಬಾಹ್ಯ ಮೂಲದಿಂದ ತಾತ್ಕಾಲಿಕವಾಗಿ ನೇಮಕ ಮಾಡಲು ಉದ್ದೇಶಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ದಿನಾಂಕ 30–11–2019 ರೊಳಗಾಗಿ ಮುಖ್ಯ ಚುನಾವಣಾಧಿಕಾರಿಯವರ ಕಚೇರಿ, ನಿರ್ವಾಚನ ನಿಲಯ, ಶೇಷಾದ್ರಿರಸ್ತೆ, ಬೆಂಗಳೂರು ಇಲ್ಲಿಗೆ ನೋಂದಾಯಿತ ಅಂಚೆ ಮೂಲಕ ಅರ್ಜಿ ಸಲ್ಲಿಸತಕ್ಕದ್ದು. ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿ ಹಾಗೂ **Terms of Reference** ಕುರಿತು **www.ceokarnataka.kar.nic.in** ಸಂಪರ್ಕಿಸಬಹುದು.

**Qualifications: Bachelor of Engineering in Computer Science / Electronics and Communication/ Information Science, Masters in Engineering/ M. Tech holders are preferable.**

**Experience: At least 5 years experience in the development of the software applications; and Management of Applications, Capacity building of the users**

**preferable related to the Electoral Roll Management. IT applications pertaining to the Elections, Other similar projects.**

## ಕೃಷಿ ಪ್ರಶಸ್ತಿ (ಬೆಳೆ ಸ್ಪರ್ಧೆ)ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 25 (ಕರ್ನಾಟಕ ವಾರ್ತೆ)

2019-20 ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿ (ಬೆಳೆ ಸ್ಪರ್ಧೆ)ಗಾಗಿ ಭಾಗವಹಿಸಲಿಚ್ಛಿಸುವ ರೈತರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎಲ್ಲಾ ಮಟ್ಟಗಳಿಗೂ (ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕೃಷಿ ಪಶಸ್ತಿಗೆ) ಅನ್ವಯಿಸುವಂತೆ ನಿಗದಿತ ನಮೂನೆಯಲ್ಲಿ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಪ್ರವೇಶ ಶುಲ್ಕ ಪ.ಜಾ/ಪ.ವರ್ಗದ ರೈತರಿಗೆ ರೂ. 25.00 ಮತ್ತು ಸಾಮಾನ್ಯ ರೈತರಿಗೆ ರೂ.100/- 2019-20ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ರೈತರು ಅರ್ಜಿ ಸಲ್ಲಿಸಲು 2019 ರ 30 ನೇ ನವೆಂಬರ್ ಕೊನೆಯ ದಿನವಾಗಿದ್ದು, ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು, ಅರ್ಜಿ ನಮೂನೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ವಿಸ್ತರಣಾ ಕಾರ್ಯಕರ್ತರನ್ನಾಗಲಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನಾಗಲಿ ಸಂಪರ್ಕಿಸುವಂತೆ ಉಪ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನ ದಿವಸ್ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 25 (ಕರ್ನಾಟಕ ವಾರ್ತೆ)

ರಾಜ್ಯ ವಿಧಾನ ಪರಿಷತ್ತಿನ ಸಭಾಪತಿ ಕೆ ಪ್ರತಾಪ್‌ಚಂದ್ರ ಶೆಟ್ಟಿ ಹಾಗೂ ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ನವೆಂಬರ್ 26 ರಂದು ಬೆಳಿಗ್ಗೆ 10-00 ಗಂಟೆಗೆ ಸಂವಿಧಾನ ದಿವಸ್ ಕಾರ್ಯಕ್ರಮದ ಅಂಗವಾಗಿ ವಿಧಾನ ಸೌಧ ಮುಂಭಾಗದಲ್ಲಿರುವ ಸಂವಿಧಾನ ಶಿಲ್ಪಿ ಡಾ : ಬಿ. ಆರ್. ಅಂಬೇಡ್ಕರ್ ಪ್ರತಿಮೆಗೆ ಗೌರವ ಸಮರ್ಪಣೆ ಮಾಡಲಿದ್ದಾರೆ.

ಅಲ್ಲದೆ, ಅದೇ ದಿನ ಬೆಳಿಗ್ಗೆ 10-30 ಗಂಟೆಗೆ ವಿಧಾನ ಸೌಧದ ಔತಣ ಸಭಾಂಗಣದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶ ನ್ಯಾ : ಎನ್. ಕುಮಾರ್ ಅವರು ಸಂವಿಧಾನ ಪಕ್ಷಿನೋಟ ಕುರಿತು ಪ್ರಧಾನ ಭಾಷಣ ಮಾಡಲಿದ್ದಾರೆ. ಎಂದು ರಾಜ್ಯ ವಿಧಾನ ಸಭೆಯ ಕಾರ್ಯದರ್ಶಿ ಎಂ ಕೆ ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.